ಪತ್ರಿಕಾ ಪ್ರಕಟಣೆ - PRESS RELEASE

**ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ**
**RESERVE BANK OF INDIA**

ಜಾಲತಾಣ : www.rbi.org.in
Website : www.rbi.org.in
ಇಮೇಲ್ /email : helpdoc@rbi.org.in

**ಸಂವಹನ ಇಲಾಖೆ, ಕೇಂದ್ರ ಕಚೇರಿ, ಶಾಹಿದ್ ಭಗತ್ ಸಿಂಗ್ ಮಾರ್ಗ, ಫೋರ್ಟ್, ಮುಂಬೈ-400001 ಫೋನ್/ಫೋನ್: 022- 22660502**

**Department of Communication, Central Office, Shahid Bhagat Singh Marg, Fort, Mumbai-400001 फोन/Phone: 022- 22660502**

25 ಆಗಸ್ಟ್ 2025

**ದಿ ಬಳ್ಳಾರಿ ಜಿಲ್ಲಾ ಸಹಕಾರಿ ಕೇಂದ್ರ ಬ್ಯಾಂಕ್ ಲಿಮಿಟೆಡ್, ಕರ್ನಾಟಕ - ಈ ಬ್ಯಾಂಕಿಗೆ ಆರ್ ಬಿ ಐ ವಿತ್ತೀಯ ದಂಡ ವಿಧಿಸಿದೆ.**

ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 19 ಮತ್ತು 20 ರ ಜೊತೆ ಓದಲಾದ ಕಲಂ 56 ರ ನಿಬಂಧನೆಗಳ ಉಲ್ಲಂಘನೆಗಾಗಿ ಭಾರತೀಯ ರಿಸರ್ವ್ ಬ್ಯಾಂಕ್ (ಆರ್ ಬಿ ಐ) ತನ್ನ ಆಗಸ್ಟ್ 19, 2025 ರ ಆದೇಶದ ಮೂಲಕ ದಿ ಬಳ್ಳಾರಿ ಜಿಲ್ಲಾ ಸಹಕಾರಿ ಕೇಂದ್ರ ಬ್ಯಾಂಕ್ ಲಿಮಿಟೆಡ್, ಕರ್ನಾಟಕ - ಈ ಬ್ಯಾಂಕಿಗೆ (ಬ್ಯಾಂಕು) ರೂ. 1.50 ಲಕ್ಷ ( ರೂ. ಒಂದು ಲಕ್ಷ ಐವತ್ತು ಸಾವಿರ ಮಾತ್ರ) ವಿತ್ತೀಯ ದಂಡ ವಿಧಿಸಿದೆ. ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 47 ಎ (1)(ಸಿ ) ಜೊತೆ ಓದಲಾದ ಕಲಂ 46(4) (i) ಮತ್ತು 56 ರ ಅಡಿಯಲ್ಲಿ ತನಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭಾರತೀಯ ರಿಸರ್ವ್ ಬ್ಯಾಂಕ್ ಈ ದಂಡವನ್ನು ವಿಧಿಸಿದೆ.

ಮಾರ್ಚ್ 31, 2024 ರಂದು ಇದ್ದ ಬ್ಯಾಂಕಿನ ಆರ್ಥಿಕ ಪರಿಸ್ಥಿತಿ ಯನ್ನು ಆಧರಿಸಿ ಬ್ಯಾಂಕಿನ ಶಾಸನಬದ್ದ ನಿರೀಕ್ಷಣೆಯನ್ನು ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ (ನಬಾರ್ಡ್ NABARD ) ಮಾಡಿತ್ತು. ಶಾಸನಬದ್ದ ನಿಬಂಧನೆಗಳ ಉಲ್ಲಂಘನೆ ಬಗ್ಗೆ ನಿರೀಕ್ಷಣಾ ನಿಷ್ಕರ್ಷೆಯನ್ನು ಮತ್ತು ಈ ಸಂಬಂಧ ನಡೆದ ಪತ್ರ ವ್ಯವಹಾರಗಳನ್ನು ಆಧರಿಸಿ ಬ್ಯಾಂಕಿಗೆ ಶಾಸನಬದ್ದ ನಿಬಂಧನೆಗಳ ಅನುಪಾಲನೆ ಮಾಡುವಲ್ಲಿ ವಿಫಲವಾದುದಕ್ಕಾಗಿ ಏಕೆ ದಂಡ ವಿಧಿಸಬಾರದು ಎಂದು ಕಾರಣ ಕೇಳಿ ನೋಟೀಸನ್ನು ನೀಡಲಾಗಿತ್ತು. ಬ್ಯಾಂಕು ಈ ಕುರಿತು ಸಲ್ಲಿಸಿದ ಉತ್ತರ ಮತ್ತು ವೈಯಕ್ತಿಕ ವಿಚಾರಣೆಯಲ್ಲಿ ಮಾಡಲಾದ ಮೌಖಿಕ ನಿವೇದನೆಗಳನ್ನು ಪರಿಗಣಿಸಿದ ನಂತರ ಭಾರತೀಯ ರಿಸರ್ವ್ ಬ್ಯಾಂಕಿಗೆ, ಇತರ ವಿಷಯಗಳ ನಡುವೆ, ಬ್ಯಾಂಕಿನ ವಿರುದ್ದ ಮಾಡಲಾದ ಕೆಳಕಂಡ ಆರೋಪಗಳು ಸ್ಥಿರಪಟ್ಟಿವೆ ಮತ್ತು ವಿತ್ತೀಯ ದಂಡ ವಿಧಿಸುವುದಕ್ಕೆ ಅರ್ಹವಾಗಿದೆ ಎಂದು ಗೊತ್ತಾಯಿತು:

ಬ್ಯಾಂಕು :

i. ತನ್ನ ಒಬ್ಬ ನಿರ್ದೇಶಕರಿಗೆ ಸಾಲ ಮಂಜೂರು ಮಾಡಿತ್ತು; ಮತ್ತು
ii. ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮದ ಉಲ್ಲಂಘನೆ ಮಾಡಿ ಇನ್ನೊಂದು ಸಹಕಾರಿ ಸಂಘದಲ್ಲಿ ಷೇರುಗಳನ್ನು ಹೊಂದಿತ್ತು

ಶಾಸನಬದ್ಧ ಅನುಪಾಲನೆಯಲ್ಲಿ ಕಂಡುಬಂದ ಕೊರತೆಗಾಗಿ ಮೇಲಿನ ಕ್ರಮವನ್ನು ತೆಗೆದುಕೊಳ್ಳಲಾಗಿದೆಯೇ ವಿನಃ ಇದು ಬ್ಯಾಂಕು ತನ್ನ ಗ್ರಾಹಕರೊಂದಿಗೆ ಮಾಡಿಕೊಂಡ ಯಾವುದೇ ವ್ಯವಹಾರ ಅಥವಾ ಒಪ್ಪಂದದ ಸಿಂಧುತ್ವದ ಬಗೆಗಿನ ಘೋಷಣೆಯಲ್ಲ. ಅಲ್ಲದೆ, ಈ ವಿತ್ತೀಯ ದಂಡ ವಿಧಿಸುವ ಕ್ರಿಯೆಯು ಭಾರತೀಯ ರಿಸರ್ವ್ ಬ್ಯಾಂಕು ಈ ಬ್ಯಾಂಕಿನ ಮೇಲೆ ತೆಗೆದುಕೊಳ್ಳಬಹುದಾದ ಯಾವುದೇ ಇತರ ಕ್ರಮದ ಪೂರ್ವಾಗ್ರಹದಿಂದ ಹೊರತಾಗಿದೆ.

**(ಪುನೀತ್ ಪಾಂಚೋಲಿ)**
ಚೀಫ್ ಜನರಲ್ ಮ್ಯಾನೇಜರ್

**ಪತ್ರಿಕಾ ಪ್ರಕಟಣೆ: 2025-2026/973**